# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 276 |
| ಸದಸ್ಯರ ಹೆಸರು | : | ಶ್ರೀಮತಿ ತಾರಾ ಅನೂರಾಧ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 12-07-2018 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳ ಶಿಕ್ಷಕರ/ಉಪನ್ಯಾಸಕರ ವರ್ಗಾವಣೆಯ ಕಾರ್ಯವು ಪ್ರಸ್ತುತ ಯಾವ ಹಂತದಲ್ಲಿದೆ; | 2017-18ನೇ ಸಾಲಿನ ರಾಜ್ಯ ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲಾ ಶಿಕ್ಷಕರ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವರ್ಗಾವಣಾ ಪ್ರಕ್ರಿಯೆಯನ್ನು ಕೌನ್ಸಿಲಿಂಗ್ ಮೂಲಕ ನಡೆಸಲು ಜನವರಿ 2018ರಲ್ಲಿ ವೇಳಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಆದರೆ, ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದ ಕಾರಣ ವರ್ಗಾವಣೆ ಪ್ರಕ್ರಿಯೆಯನ್ನು ಮುಂದೂಡಲಾಗಿತ್ತು. ಈ ಮಧ್ಯೆ ವರ್ಗಾವಣಾ ಅಧಿಸೂಚನೆಗೆ ರಾಜ್ಯ ಉಚ್ಚ ನ್ಯಾಯಾಲಯದಿಂದ ಕೆಲವು ಪ್ರಕರಣಗಳಲ್ಲಿ ತಡೆಯಾಜ್ಞೆ ಬಂದಿದ್ದು, ತಡೆಯಾಜ್ಞೆಯನ್ನು ತೆರವುಗೊಳಿಸಲು ಇಲಾಖೆಯಿಂದ ಅಗತ್ಯ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗಿದೆ. |
| ಆ. | ಪ್ರಸಕ್ತ ಸಾಲಿನಲ್ಲಿ ವರ್ಗಾವಣೆ ಪ್ರಕ್ರಿಯೆಯಲ್ಲಿ ಅಳವಡಿಸಿಕೊಂಡಿರುವ ನಿಯಮಗಳೇನು; | ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣಾ ನಿಯಂತ್ರಣ) (ತಿದ್ದುಪಡಿ) ನಿಯಮಗಳು 2017 ದಿನಾಂಕ:29-11-2017ರ ನಿಯಮಗಳನ್ನು ಅಳವಡಿಸಿಕೊಳ್ಳಲಾಗಿದೆ. |
| ಇ. | ಯಾವ ಕಾರಣಕ್ಕಾಗಿ ವರ್ಗಾವಣೆ ಪ್ರಕ್ರಿಯೆಯು ವಿಳಂಬವಾಗಿದೆ; | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಶಿಕ್ಷಕರ ವರ್ಗಾವಣೆ ಸಂಬಂಧ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ತಡೆಯಾಜ್ಞೆ ಜಾರಿಯಲ್ಲಿರುವುದರಿಂದ ವರ್ಗಾವಣೆ ಪ್ರಕ್ರಿಯೆ ವಿಳಂಬವಾಗಿದೆ.<br>ಪದವಿ ಪೂರ್ವ ಉಪನ್ಯಾಸಕರ ಕೌನ್ಸಲಿಂಗ್ ಸಂಬಂಧಪಟ್ಟಂತೆ, ಎ. ಬಿ, ಸಿ ವಲಯಗಳ ಗುರುತಿಸುವಿಕೆಗೆ ತಿದ್ದುಪಡಿ ಮಾಡಲು ಕ್ರಮವಹಿಸುತ್ತಿರುವುದರಿಂದ ಪ್ರಕ್ರಿಯೆ ವಿಳಂಬವಾಗಿದೆ. |
| ಈ. | ಈಗಾಗಲೇ ಜಾರಿಗೆ ತಂದಿರುವ ಹೊಸ ನಿಯಮದಲ್ಲಿ ಯಾವ ಯಾವ ನಿಯಮಗಳನ್ನು ಸಡಿಲಗೊಳಿಸಲು ಸರ್ಕಾರ ನಿರ್ಧರಿಸಿದೆ; | ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣಾ ನಿಯಂತ್ರಣ) (ತಿದ್ದುಪಡಿ) ನಿಯಮಗಳು 2017ರ ಈ ಕೆಳಕಂಡ ನಿಯಮಗಳನ್ನು ಸಡಿಲಗೊಳಿಸಲು ನಿರ್ಧರಿಸಲಾಗಿದೆ.<br>1. ಒಂದು ಘಟಕದ ಒಳಗೆ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಲು ಕನಿಷ್ಠ ಸೇವಾವಧಿ 5 ವರ್ಷಗಳನ್ನು ನಿಗದಿಮಾಡಿರುವುದನ್ನು 3 ವರ್ಷಗಳಿಗೆ ನಿಗದಿಪಡಿಸಲು.<br>2. ಕಡ್ಡಾಯ ವರ್ಗಾವಣೆಯಲ್ಲಿ Terminaly ill, ಕ್ಯಾನ್ಸರ್ ಮತ್ತು ಡಯಾಲಿಸಿಸ್ (ಕಿಡ್ನಿ) ಒಳಗಾಗಿರುವವರಿಗೆ ವಿನಾಯ್ತಿ ನೀಡಲು. |

| | | |
|---|---|---|
| | | 3. ಎ.ಬಿ.ಸಿ ವಲಯಗಳ ಗುರುತಿಸಿರುವ ಸ್ಥಳಗಳನ್ನು ತಿದ್ದುಪಡಿತರಲು. |
| ಉ. | ಶಿಕ್ಷಕ/ಉಪನ್ಯಾಸಕರ ವರ್ಗಾವಣೆ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭ ಮಾಡಲು ಸರ್ಕಾರ ಚಿಂತಿಸಿದೆ? | ನ್ಯಾಯಾಲಯದ ತಡೆಯಾಜ್ಞೆ ತೆರವುಗೊಂಡ ನಂತರ ಹಾಗೂ ತಿದ್ದುಪಡಿಯನ್ನು ತರಲು . ಪ್ರಸ್ತಾಪಿಸಿರುವ ಅಂಶಗಳಿಗೆ ತಿದ್ದುಪಡಿ ತಂದು ಶೀಘ್ರವಾಗಿ ವರ್ಗಾವಣೆ ಕೌನ್ಸಲಿಂಗ್ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು. |

ಇಡಿ 40 ಪಿಎಂಎ 2018

(ಎನ್. ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.